# ಕರ್ನಾಟಕ ವಿಧಾನಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: | : | 378 |
| ಸದಸ್ಯರ ಹೆಸರು | : | ಶ್ರೀ ಎನ್. ರವಿಕುಮಾರ್ |
| ಉತ್ತರಿಸಬೇಕಾದ ದಿನಾಂಕ | : | 15.09.2022 |
| ಉತ್ತರಿಸುವ ಸಚಿವರು: | : | ಗೃಹ ಸಚಿವರು |

| ಕ್ರಸ | ಪ್ರಶ್ನೆ | ಉತ್ತರ |
|---|---|---|
| ಅ | ಅನ್ಯ ರಾಜ್ಯದ ವ್ಯಕ್ತಿಗಳು ನಮ್ಮ ರಾಜ್ಯಕ್ಕೆ ಬಂದು ಇಲ್ಲಿನ ಜನರನ್ನು ಬರ್ಬರವಾಗಿ ಹತ್ಯೆ ಮಾಡುತ್ತಿದ್ದು, ಇದರಿಂದ ಸಮಾಜದ ಸ್ವಾಸ್ಥ್ಯ ಹಾಳಾಗುತ್ತಿರುವುದಲ್ಲದೆ ಕೋಮು ಗಲಭೆಗಳಿಗೆ ಕಾರಣವಾಗುತ್ತಿದ್ದು, ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು; | ಅನ್ಯ ರಾಜ್ಯದ ವ್ಯಕ್ತಿಗಳು ನಮ್ಮ ರಾಜ್ಯಕ್ಕೆ ಬಂದು ಇಲ್ಲಿನ ಜನರನ್ನು ಬರ್ಬರವಾಗಿ ಹತ್ಯೆ ಮಾಡುತ್ತಿರುವ ಬಗ್ಗೆ ಇತ್ತೀಚಿಗೆ ಯಾವುದೇ ಘಟನೆಗಳು ಕಂಡುಬಂದಿರುವುದಿಲ್ಲ. ಅದಾಗಿಯೂ ಈ ಪ್ರಕಾರ ಘಟನೆಗಳನ್ನು ತಡೆಗಟ್ಟಲು ಪೊಲೀಸ್ ಇಲಾಖೆಯಲ್ಲಿ ಈ ಕೆಳಕಂಡ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆ:<br><br>➢ ಕೋಮು ಗಲಭೆಗಳು ಮತ್ತು ಕೋಮು ಹತ್ಯೆಗಳ ಘಟನೆಗಳು ಕಂಡುಬಂದ ತಕ್ಷಣ ಪ್ರಕರಣ ದಾಖಲಿಸಿ, ಹಿರಿಯ ಪೊಲೀಸ್ ಅಧಿಕಾರಿಗಳು ಘಟನೆ ಜರುಗಿದ ಸ್ಥಳಕ್ಕೆ ಭೇಟಿ ನೀಡಿ ಸೂಕ್ತ ಕಾನೂನು ಕ್ರಮ ಜರುಗಿಸಲಾಗುತ್ತದೆ.<br>➢ ಪ್ರಮುಖ ಹಬ್ಬಗಳಲ್ಲಿ ಮತ್ತು ಬೇರೆ ಪ್ರಮುಖ ದಿನಗಳಲ್ಲಿ ಅಂತರ್ ರಾಜ್ಯ ಗಡಿ ಭಾಗಗಳಲ್ಲಿ ಚೆಕ್ ಪೋಸ್ಟ್ ಅಳವಡಿಸಿ ಸಂಶಯಾಸ್ಪದ ವ್ಯಕ್ತಿಯು ಶಸ್ತ್ರಾಸ್ತ್ರ ಹಾಗೂ ಮಾರಕಾಸ್ತ್ರಗಳನ್ನು ಸಾಗಿಸದಂತೆ ಕ್ರಮಕೈಗೊಳ್ಳಲಾಗುತ್ತದೆ.<br>➢ ಕೆಲವು ಸಂಘಟನೆಗಳು ಅಂತರ ರಾಜ್ಯ ಉಪಸ್ಥಿತಿ ಹೊಂದಿದ್ದು, ಈ ಸಂಘಟನೆಗಳಿಗೆ ನಮ್ಮ ರಾಜ್ಯಕ್ಕೆ ಬೇರೆ ರಾಜ್ಯದಿಂದ ಬರುವ ಸದಸ್ಯರ ಬಗ್ಗೆ ಗುಪ್ತ ಮಾಹಿತಿ ಸಂಗ್ರಹಿಸಿ ಅವರ ಮೇಲೆ ಸೂಕ್ತ ನಿಗಾ ವಹಿಸಲಾಗುತ್ತಿದೆ.<br>➢ ಸೂಕ್ಷ್ಮ ಪ್ರದೇಶಗಳಲ್ಲಿ ಸಿಸಿಟಿವಿಗಳನ್ನು ಅಳವಡಿಸಿ ಸಂಶಯಾಸ್ಪದ ವ್ಯಕ್ತಿಗಳ ಚಲನವಲನಗಳ ಮೇಲೆ ನಿಗಾವಹಿಸಲಾಗಿದೆ.<br>➢ ಕೋಮು ಸಾಮರಸ್ಯ ಕದಡಿ, ಈ ಹಿಂದೆ ಪ್ರಕರಣ ದಾಖಲಾಗಿರುವ ಪ್ರಕರಣಗಳ ಆರೋಪಿಗಳ ಮೇಲೆ ರೌಡಿಹಾಳೆಗಳನ್ನು ತೆರೆಯಲಾಗಿದೆ ಹಾಗೂ ಅವರ ಮೇಲೆ ಆಗಾಗ್ಗೆ ಭದ್ರತಾ ಕಾಯಿದೆಯಡಿ ಪ್ರಕರಣ ದಾಖಲು ಮಾಡಲಾಗುತ್ತಿದೆ.<br>➢ ಠಾಣಾಧಿಕಾರಿ, ಗುಪ್ತಮಾಹಿತಿ/ ಬೀಟ್ ಸಿಬ್ಬಂದಿಗೆ ಈಗಾಗಲೇ ಕೋಮುಸಾಮರಸ್ಯ ಕದಡುತ್ತಿರುವವರ ಬಗ್ಗೆ ನಿಗಾ ಇರಿಸಲು ಸೂಚನೆ ನೀಡಲಾಗಿದೆ ಹಾಗೂ ಅಂತಹವರ ಬಗ್ಗೆ ಗುಪ್ತ ಮಾಹಿತಿ ಕಲೆಹಾಕುವಂತೆ ಸೂಚನೆ ನೀಡಲಾಗಿದೆ.<br>➢ ಆಗಾಗ್ಗೆ ಕಡ್ಡಾಯವಾಗಿ ವಿವಿಧ ಕೋಮುಗಳ ಮುಖಂಡರನ್ನು ಕರೆದು ಶಾಂತಿಸಭೆ ನಡೆಸಿ, ಸಾಮರಸ್ಯದ ಮನೋಭಾವದ ಜೊತೆ ಇತರ ರಾಜ್ಯಗಳಿಂದ ಒಳಬರುವ ವ್ಯಕ್ತಿಗಳ ಬಗ್ಗೆ ಮಾಹಿತಿ ನೀಡುವಂತೆ ಸೂಚಿಸಲಾಗಿದೆ.<br>➢ ಗೂಂಡಾ/ ರೌಡಿಶೀಟರ್‌ಗಳನ್ನು ಠಾಣೆಗಳಿಗೆ ಕರೆದು ಪರೇಡ್ ಮಾಡುವಂತೆ ಸೂಚಿಸಲಾಗಿದೆ.<br>➢ ಕೋಮು ಸಾಮರಸ್ಯ ಕದಡುವವರನ್ನು ಗಡೀಪಾರು ಮಾಡಲಾಗುವುದು. |

| | | |
|---|---|---|
| ಆ | ಸದರಿ ಗಲಭೆಗೆ ಕಾರಣರಾದ ವ್ಯಕ್ತಿಗಳು ಹೊಂದಿರುವ ಅನಧಿಕೃತ ಅಕ್ರಮ ಆಸ್ತಿಗಳನ್ನು ಸರ್ಕಾರ ವಶಪಡಿಸಿಕೊಳ್ಳಲು ಮತ್ತು ಅನಧಿಕೃತ ಅಕ್ರಮ ಆಸ್ತಿಗಳನ್ನು ನೆಲಸಮ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; (ವಿವರ ನೀಡುವುದು) | ಪ್ರಸ್ತುತ ಒಳಾಡಳಿತ ಇಲಾಖೆಯ ಮುಂದೆ ಯಾವುದೇ ಪ್ರಸ್ತಾವನೆ ಇರುವುದಿಲ್ಲ. |
| ಇ | ಕಳೆದ ಒಂದು ವರ್ಷದಲ್ಲಿ ರಾಜ್ಯದಲ್ಲಿ ವಿನಾಕಾರಣ ಗಲಭೆ ಸೃಷ್ಟಿಸಿ ಸಾರ್ವಜನಿಕ ಆಸ್ತಿಪಾಸ್ತಿಯ ನಷ್ಟಕ್ಕೆ ಕಾರಣರಾದವರಿಂದಲೇ ಸದರಿ ನಷ್ಟವನ್ನು ವಸೂಲಿ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? ಡಿಜೆ ಹಳ್ಳಿ, ಕೆ.ಜಿ.ಹಳ್ಳಿ ಗಲಭೆಯ ಸಂದರ್ಭದಲ್ಲಿ ನಷ್ಟವಾದ ಸಾರ್ವಜನಿಕ ಮತ್ತು ಸರ್ಕಾರಿ ಆಸ್ತಿಗಳ ಒಟ್ಟು ಮೊತ್ತವೆಷ್ಟು? (ವಿವರ ನೀಡುವುದು) | ಕೆ.ಜಿ.ಹಳ್ಳಿ ಮತ್ತು ಡಿಜೆ ಹಳ್ಳಿ ಗಲಭೆಗೆ ಸಂಬಂಧಪಟ್ಟಂತೆ ನಷ್ಟವಾದ ಸಾರ್ವಜನಿಕ ಮತ್ತು ಸರ್ಕಾರಿ ಆಸ್ತಿಗಳ ಅಂದಾಜು ಮಾಡಲು ಸರ್ಕಾರದ ಅಧಿಸೂಚನೆ ಸಂಖ್ಯೆ: ಹೆಚ್‌ಡಿ 238 ಎಸ್‌ಎಸ್‌ಟಿ 2020 ದಿನಾಂಕ: 05.09.2020 ರ ಸರ್ಕಾರದ ಆದೇಶದಂತೆ ನಿವೃತ್ತ ನ್ಯಾಯಮೂರ್ತಿಗಳಾದ ಶ್ರೀ ಹೆಚ್.ಎಸ್. ಕೆಂಪಣ್ಣ ರವರನ್ನು ಕ್ಲೈಮ್ ಕಮಿಷನರ್ ಆಗಿ ನೇಮಕ ಮಾಡಲಾಗಿದೆ. ವರದಿಯನ್ನು ನಿರೀಕ್ಷಿಸಲಾಗುತ್ತಿದೆ. |

ಸಂಖ್ಯೆ: ಹೆಚ್‌ಡಿ 85 ಪಿಸಿಇ 2022

(ಆರಗ ಜ್ಞಾನೇಂದ್ರ)
ಗೃಹ ಸಚಿವರು